ಕರ್ನಾಟಕ ಸರ್ಕಾರ

# ಮೀನುಗಾರಿಕೆ ನಿರ್ದೇಶನಾಲಯ

3ನೇ ಮಹಡಿ,ಪೋಡಿಯಂಬ್ಲಾಕ್,ವಿಶ್ವೇಶ್ವರಯ್ಯಕೇಂದ್ರ,ಡಾ||ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು – 560 001

ದೂ:080-22864681/4604 ಫ್ಯಾಕ್ಸ್:080-2286 4619 ಇಮೇಲ್ :dof-blr-ka@nic.in

====================================================

ಸಂಖ್ಯೆ: DoF/TECH0BRS/51/2021 E-556845 ದಿನಾಂಕ:28.10.2021

## ಸುತ್ತೋಲೆ

**ವಿಷಯ**: ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯನ್ನು ಅನುಷ್ಠಾನ ಮಾಡುವ ಬಗ್ಗೆ

**ಉಲ್ಲೇಖ**: ದಿನಾಂಕ 28.10.2021 ರಂದು ನಡೆದ SLAMC ಸಭೆಯಲ್ಲಿ ಮಾನ್ಯ ಸರಕಾರದ ಕಾರ್ಯದರ್ಶಿಗಳು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯವರ ಸೂಚನೆಯಂತೆ

*******************

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 28.10.2021 ರಂದು ನಡೆದ SLAMC ಸಭೆಯಲ್ಲಿ ತೀರ್ಮಾನಿಸಿದಂತೆ 2021-22ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳಿಂದ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ 30.11.2021 ನಿಗದಿಗೊಳಿಸಲಾಗಿದೆ. ಹಾಗೂ ನಂತರ ಸ್ವೀಕೃತವಾದಂತಹ ಅರ್ಜಿಗಳನ್ನು ಮುಂದಿನ ಸಾಲಿಗೆ ಅಂದರೆ 2022-23ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಪರಿಗಣಿಸುವುದು.

ಮುಂದುವರೆದು, ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು 2020-21 ಸಾಲಿಗೆಅನುಮೋದನೆಗೊಂಡ ಮತ್ತು 2021-22ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳಿಗೆ ಕಾರ್ಯಾದೇಶ ನೀಡಿ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡುವಂತೆ, ಹಾಗೂ ಘಟಕ ಪೂರ್ಣಗೊಂಡ/ಖರೀದಿ ಪೂರ್ಣಗೊಂಡ ಯೋಜನೆಗಳಿಗೆ ಆರ್ಥಿಕ ಮಂಜೂರಾತಿ ಕೋರಿ ಫಲಾನುಭವಿ ಪಟ್ಟಿಯೊಂದಿಗೆ ದಿನಾಂಕ 30.11.2021ರೊಳಗಾಗಿ ಕೇಂದ್ರ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಲಾಗಿದೆ.

ಡಿಸೆಂಬರ್ ಮೊದಲನೇ ವಾರದಲ್ಲಿ ಮಾನ್ಯ ಸರಕಾರದ ಕಾರ್ಯದರ್ಶಿಗಳು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯನ್ನು ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನೆ ಸಭೆ ನಡೆಯಲಿದ್ದು, ಮೇಲೆ ತಿಳಿಸಿದಂತೆ ಯೋಜನೆಯನ್ನು ಅನುಷ್ಠಾನಗೊಳಿಸದ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮಕೈಗೊಳ್ಳಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು.

Ramachandra 28/11

ಮೀನುಗಾರಿಕೆ ನಿರ್ದೇಶಕರು

ಗೆ,

ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ

ಪ್ರತಿಯನ್ನು

ಎಲ್ಲಾ ಮೀನುಗಾರಿಕೆ ಅಪರ ನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ

ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ